Akashvani: Bangalore
National Bulletin In Kannada
09.01.2026 : 7.35AM
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

09.01.2026 : 7.35AM

********

**ಮುಖ್ಯಾಂಶಗಳು :**

1. ನವದೆಹಲಿಯಲ್ಲಿ ಇಂದಿನಿಂದ ವಿಕಸಿತ ಭಾರತ ಯುವ ನಾಯಕರ ಸಂವಾದ
2. ಭಯೋತ್ಪಾದನಾ ಮುಕ್ತ ಜಮ್ಮು-ಕಾಶ್ಮೀರಕ್ಕೆ ಸರ್ಕಾರ ಬದ್ಧ - ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಪಾದನೆ
3. ನವದೆಹಲಿಯಲ್ಲಿಂದು ರೈಲ್ವೆಯ ನೂರು ಅಧಿಕಾರಿಗಳಿಗೆ ಅತಿ ವಿಶಿಷ್ಟ ರೈಲು ಸೇವಾ ಪುರಸ್ಕಾರ ಪ್ರದಾನ
4. ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್; ಮಹಿಳಾ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿಂದು ಪಿ.ವಿ. ಸಿಂಧು - ಅಕಾನೆ ಯಮಗುಚಿ ಮುಖಾಮುಖಿ

*******

ವಿಕಸಿತ ಭಾರತ ಯುವ ನಾಯಕರ ಸಂವಾದ ೨೦೨೬ರ ಎರಡನೇ ಆವೃತ್ತಿಯು ಇಂದಿನಿಂದ ಈ ತಿಂಗಳ ೧೨ರವರೆಗೆ ನವದೆಹಲಿಯಲ್ಲಿ ನಡೆಯಲಿದೆ ಎಂದು ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಮನ್ಸುಖ್ ಮಾಂಡವಿಯ ತಿಳಿಸಿದ್ದಾರೆ. ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರ ಸಮ್ಮುಖದಲ್ಲಿ ನಾಳೆ ಔಪಚಾರಿಕ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಇದೇ ೧೨ ರಂದು ನಡೆಯುವ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ. ದೇಶ ಮತ್ತು ವಿದೇಶಗಳಿಂದ ೨ ಸಾವಿರದ ೫೦೦ಕ್ಕೂ ಹೆಚ್ಚು ಯುವಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಇಸ್ರೋ ಗಗನಯಾತ್ರಿಗಳಾದ ಗ್ರೂಪ್ ಕ್ಯಾಪ್ಟನ್ ಸುಭಾಂಶು ಶುಕ್ಲಾ ಮತ್ತು ಗ್ರೂಪ್ ಕ್ಯಾಪ್ಟನ್ ಪ್ರಶಾಂತ್ ನಾಯರ್ ಹಾಗೂ ಭಾರತೀಯ ಮಹಿಳಾ ಕ್ರಿಕೆಟ್ ತಂಡದ ನಾಯಕಿ ಹರ್ಮನ್‌ಪ್ರೀತ್ ಕೌರ್ ಭಾಗವಹಿಸಿ ಸಂವಾದ ನಡೆಸಲಿದ್ದಾರೆ ಎಂದು ಸಚಿವ ಮನ್ಸುಖ್ ಮಾಂಡವಿಯ ತಿಳಿಸಿದ್ದಾರೆ.

*******

ಭಯೋತ್ಪಾದಕ ಮೂಲಸೌಕರ್ಯ ಮತ್ತು ಭಯೋತ್ಪಾದಕರಿಗೆ ಹಣಕಾಸು ಒದಗಿಸುವವರನ್ನು ಗುರಿಯಾಗಿಟ್ಟುಕೊಂಡು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳು ಯುದ್ಧೋಪಾದಿಯಲ್ಲಿ ಮುಂದುವರಿಯಬೇಕು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಉನ್ನತ ಮಟ್ಟದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಭಯೋತ್ಪಾದನಾ ಮುಕ್ತ ಜಮ್ಮು ಮತ್ತು ಕಾಶ್ಮೀರದ ಗುರಿಯನ್ನು ಸಾಧಿಸಲು ಎಲ್ಲಾ ಸಂಪನ್ಮೂಲಗಳನ್ನು ಆದಷ್ಟು ಬೇಗ ಲಭ್ಯವಾಗುವಂತೆ ಮಾಡಲಾಗುವುದು ಎಂದು ತಿಳಿಸಿದರು. ೩೭೦ನೇ ವಿಧಿ ರದ್ದುಪಡಿಸಿದ ನಂತರ ಆಗಿರುವ ಸಕಾರಾತ್ಮಕ ಬದಲಾವಣೆಗಳು ಸುಸ್ಥಿರವಾಗಿರುವಂತೆ ಖಚಿತಪಡಿಸಿಕೊಳ್ಳಲು ಎಲ್ಲಾ ಭದ್ರತಾ ಸಂಸ್ಥೆಗಳು ಜಾಗರೂಕರಾಗಿರಬೇಕು ಎಂದು ಅವರು ನಿರ್ದೇಶಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಜಮ್ಮು ಮತ್ತು ಕಾಶ್ಮೀರದಲ್ಲಿ ಶಾಶ್ವತ ಶಾಂತಿ ಸ್ಥಾಪಿಸಲು ಮತ್ತು ಭಯೋತ್ಪಾದನೆಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಬದ್ಧವಾಗಿದೆ ಎಂದು ಸಚಿವ ಅಮಿತ್ ಶಾ ಹೇಳಿದರು. ಭಯೋತ್ಪಾದನೆ ವಿರುದ್ಧ ಸರ್ಕಾರ ಶೂನ್ಯ ಸಹಿಷ್ಣುತೆ ನೀತಿ ಹೊಂದಿದೆ. ಕೇಂದ್ರ ಸರ್ಕಾರದ ನಿರಂತರ ಮತ್ತು ಸಂಘಟಿತ ಪ್ರಯತ್ನಗಳಿಂದಾಗಿ ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ಪರವಾದ ವ್ಯವಸ್ಥೆಯು ದುರ್ಬಲಗೊಂಡಿದೆ ಎಂದು ಅವರು ತಿಳಿಸಿದರು.

*******

ನವದೆಹಲಿಯಲ್ಲಿಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ರೈಲ್ವೆಯ ನೂರು ಅಧಿಕಾರಿಗಳಿಗೆ ಅತಿ ವಿಶಿಷ್ಟ ರೈಲು ಸೇವಾ ಪುರಸ್ಕಾರ - ೨೦೨೫ ಮತ್ತು ಉತ್ತಮವಾಗಿ ಕಾರ್ಯ ನಿರ್ವಹಿಸಿರುವ ೨೬ ರೈಲ್ವೆ ವಲಯಗಳಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಭಾರತೀಯ ರೈಲ್ವೆಗೆ ಅನುಕರಣೀಯ ಸೇವೆ ಮತ್ತು ಅತ್ಯುತ್ತಮ ಕೊಡುಗೆಗಳನ್ನು ಗುರುತಿಸಿ ಈ ಪ್ರತಿಷ್ಠಿತ ಪ್ರಶಸ್ತಿಗಳನ್ನು ನೀಡಲಾಗುತ್ತಿದೆ. ಮಹಾಕುಂಭ ಮೇಳದಂತಹ ದೊಡ್ಡ ಕಾರ್ಯಕ್ರಮಗಳಲ್ಲಿ ಸುರಕ್ಷಿತ ಮತ್ತು ಸುಗಮ ರೈಲ್ವೆ ಕಾರ್ಯಾಚರಣೆ ಖಾತ್ರಿಪಡಿಸುವಲ್ಲಿ ನಿರ್ಣಾಯಕ ಪಾತ್ರವಹಿಸಿದ ಸಿಬ್ಬಂದಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು ಎಂದು ರೈಲ್ವೆ ಸಚಿವಾಲಯ ತಿಳಿಸಿದೆ.

*******

ಭವಿಷ್ಯಕ್ಕೆ ಸಿದ್ಧವಾದ, ಸ್ಪಂದಿಸುವ ಮತ್ತು ಪರಿಣಾಮಕಾರಿ ಸಾರ್ವಜನಿಕ ಆಡಳಿತವನ್ನು ಖಾತರಿಪಡಿಸಲು ಕೃತಕ ಬುದ್ಧಿಮತ್ತೆಯನ್ನು ಮಾನವ ಬುದ್ಧಿಮತ್ತೆಯೊಂದಿಗೆ ಸಂಯೋಜಿಸುವ ಹೈಬ್ರಿಡ್ ಮಾದರಿಯು ನಿರ್ಣಾಯಕವಾಗಿರುತ್ತದೆ ಎಂದು ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ಸಾಮರ್ಥ್ಯವೃದ್ಧಿಗಾಗಿ ಕೃತಕ ಬುದ್ಧಿಮತ್ತೆ; ಆಡಳಿತವನ್ನು ಪರಿವರ್ತಿಸುವ ಕಾರ್ಯಾಗಾರ ಉದ್ದೇಶಿಸಿ ಮಾತನಾಡಿದ ಸಚಿವರು, ಕೃತಕ ಬುದ್ಧಿಮತ್ತೆಯನ್ನು ಪ್ರಬಲ ಸಾಧನವಾಗಿ ನೋಡಬೇಕು. ಇದನ್ನು ಜವಾಬ್ದಾರಿಯುತವಾಗಿ ಬಳಸಬೇಕು ಎಂದು ಹೇಳಿದ್ದಾರೆ.

*******

೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್ ಮಂಡನೆಗೂ ಮುನ್ನ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿ ನಿನ್ನೆ ದೆಹಲಿ ಸ್ಕೂಲ್ ಆಫ್ ಎಕನಾಮಿಕ್ಸ್ ವಿದ್ಯಾರ್ಥಿಗಳೊಂದಿಗೆ ಬಜೆಟ್ ಪೂರ್ವ ಸಂವಾದ ನಡೆಸಿದರು. ವಿದ್ಯಾರ್ಥಿಗಳು ಕೌಶಲ್ಯ, ಹಸಿರು ಇಂಧನ, ಗ್ರಾಮೀಣಾಭಿವೃದ್ಧಿ ಮತ್ತು ಹೊಸ ಆರ್ಥಿಕತೆಯ ಕುರಿತು ಕೇಂದ್ರ ಬಜೆಟ್‌ನಲ್ಲಿ ಪರಿಗಣಿಸಬೇಕಾದ ವ್ಯಾಪಕ ಶ್ರೇಣಿಯ ಸಲಹೆಗಳನ್ನು ನೀಡಿದರು ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

*******

ಭಾರತ - ಮ್ಯಾನ್ಮಾರ್ ಗಡಿಯ ಸಮೀಪ ಕ್ಷಿಪ್ರ ಕಾರ್ಯಾಚರಣೆ ನಡೆಸಿದ ಮಾದಕದ್ರವ್ಯ ನಿಯಂತ್ರಣ ದಳದ ಅಧಿಕಾರಿಗಳು, ಪ್ರಮುಖ ಅಂತಾರಾಷ್ಟ್ರೀಯ ಮಾದಕವಸ್ತು ಕಳ್ಳಸಾಗಣೆ ಜಾಲವನ್ನು ಬೇಧಿಸಿದ್ದು, ೭.೩ ಕೆ.ಜಿ.ಯಷ್ಟು ಉನ್ನತ ದರ್ಜೆಯ ಹೆರಾಯಿನ್‌ಅನ್ನು ವಶಪಡಿಸಿಕೊಂಡಿದ್ದಾರೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಇದಕ್ಕೆ ೧೫ ಕೋಟಿ ರೂಪಾಯಿ ಮೌಲ್ಯವಿದೆ ಎಂದು ಅಂದಾಜಿಸಲಾಗಿದೆ. ಇದೇ ವೇಳೆ ಇಬ್ಬರು ಕಳ್ಳಸಾಗಾಣೆದಾರರನ್ನು ಬಂಧಿಸಲಾಗಿದೆ. ಈ ಮೂಲಕ ಮ್ಯಾನ್ಮಾರ್‌ನಿಂದ ಮಣಿಪುರಕ್ಕೆ ನಿರಂತರವಾಗಿ ಕಳ್ಳಸಾಗಾಣೆ ಮಾಡುತ್ತಿದ್ದ ಅಂತಾರಾಷ್ಟ್ರೀಯ ಮಾದಕವಸ್ತು ಕಳ್ಳಸಾಗಣೆ ಜಾಲವನ್ನು ಬೇಧಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

*******

ನವದೆಹಲಿಯ ಭಾರತ್ ಮಂಟಪಂನಲ್ಲಿ ಇದೇ ೨೧ ರಿಂದ ೨೩ ರವರೆಗೆ ಭಾರತ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ನಿರ್ವಹಣೆ ಸಮ್ಮೇಳನ ನಡೆಯಲಿದೆ. ಇದಕ್ಕೆ ಪೂರ್ವಭಾವಿಯಾಗಿ ಭಾರತ ಚುನಾವಣಾ ಆಯೋಗ ವತಿಯಿಂದ ನವದೆಹಲಿಯಲ್ಲಿ ನಿನ್ನೆ ಮುಖ್ಯ ಚುನಾವಣಾ ಅಧಿಕಾರಿಗಳ ಸಮ್ಮೇಳನ ನಡೆಯಿತು. ಸಮ್ಮೇಳನದಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಚುನಾವಣಾ ಆಯುಕ್ತರಾದ ಡಾ. ಸುಖ್ಬೀರ್ ಸಿಂಗ್ ಸಂಧು ಮತ್ತು ಡಾ. ವಿವೇಕ್ ಜೋಶಿ ಪಾಲ್ಗೊಂಡಿದ್ದರು.

*******

ನವದೆಹಲಿಯ ಭಾರತ ಮಂಟಪಂನಲ್ಲಿ ೫೩ನೇ ವಿಶ್ವ ಪುಸ್ತಕ ಮೇಳ-೨೦೨೬ ನಾಳೆಯಿಂದ ೧೮ ರವರೆಗೆ ನಡೆಯಲಿದೆ. ಈ ಮೇಳವು ಭಾರತ ಮತ್ತು ಪ್ರಪಂಚದಾದ್ಯಂತ ಪ್ರಕಾಶಕರು, ಲೇಖಕರು, ಓದುಗರು ಮತ್ತು ಸಾಂಸ್ಕೃತಿಕ ಧ್ವನಿಗಳನ್ನು ಒಗ್ಗೂಡಿಸುತ್ತದೆ. ಒಂಬತ್ತು ದಿನಗಳ ಪುಸ್ತಕ ಮೇಳವು ೩೫ ಕ್ಕೂ ಹೆಚ್ಚು ದೇಶಗಳನ್ನು ಪ್ರತಿನಿಧಿಸುವ ಸಾವಿರಕ್ಕೂ ಹೆಚ್ಚು ಪ್ರಕಾಶಕರ ಭಾಗವಹಿಸುವಿಕೆಯನ್ನು ಆಕರ್ಷಿಸುತ್ತದೆ. ಇದೇ ಮೊದಲ ಬಾರಿಗೆ ಪುಸ್ತಕ ಮೇಳಕ್ಕೆ ಪ್ರವೇಶ ಉಚಿತವಾಗಿದ್ದು, ಪುಸ್ತಕ ಮೇಳದಲ್ಲಿ ಮೀಸಲಾದ ಮಕ್ಕಳ ಮಂಟಪವೂ ಇರುತ್ತದೆ ಎಂದು ರಾಷ್ಟ್ರೀಯ ಪುಸ್ತಕ ಟ್ರಸ್ಟ್‌ನ ನಿರ್ದೇಶಕ ಯುವರಾಜ್ ಮಲಿಕ್ ತಿಳಿಸಿದ್ದಾರೆ.

*******

ಎರಡು ಬಾರಿಯ ಒಲಿಂಪಿಕ್ ಪದಕ ವಿಜೇತ ಬ್ಯಾಡ್ಮಿಂಟನ್ ಪಟು ಪಿ.ವಿ. ಸಿಂಧು ಕೌಲಲಾಂಪುರದಲ್ಲಿಂದು ನಡೆಯಲಿರುವ ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮಹಿಳಾ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿ ಜಪಾನ್‌ನ ಅಕಾನೆ ಯಮಗುಚಿ ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ೧೬ನೇ ಸುತ್ತಿನ ಪಂದ್ಯದಲ್ಲಿ ಜಪಾನ್‌ನ ಟೊಮೊಕೊ ಮಿಯಾಜಾಕಿ ಅವರನ್ನು ೨೧-೮, ೨೧-೧೩ ಅಂತರದಿಂದ ಪಿ.ವಿ. ಸಿಂಧು ಪರಾಭವಗೊಳಿಸಿದರು. ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಅಗ್ರ ಜೋಡಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಇಂದು ಕ್ವಾರ್ಟರ್ ಫೈನಲ್‌ನಲ್ಲಿ ಇಂಡೋನೇಷ್ಯಾದ ಎಂ.ಎಸ್. ಫಿಕ್ರಿ ಮತ್ತು ಎಫ್. ಅಲ್ಫಿಯನ್ ಜೋಡಿಯನ್ನು ಎದುರಿಸಲಿದ್ದಾರೆ. ಭಾರತದ ಈ ಜೋಡಿ ಪ್ರೀ ಕ್ವಾರ್ಟರ್ ಫೈನಲ್‌ನಲ್ಲಿ ಮಲೇಷ್ಯಾದ ಜುನೈದ್ ಆರಿಫ್ ಮತ್ತು ರಾಯ್‌ಕಿಂಗ್ ಯಾಪ್ ಜೋಡಿಯನ್ನು ೨೧-೧೮, ೨೧-೧೧ ಅಂತರದಿಂದ ಸೋಲಿಸಿದರು. ಪುರುಷರ ಸಿಂಗಲ್ಸ್ ವಿಭಾಗದ ಪ್ರಿ ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ ಸೋತ ನಂತರ ಲಕ್ಷ್ಯ ಸೇನ್ ಮತ್ತು ಆಯುಷ್ ಶೆಟ್ಟಿ ಪಂದ್ಯಾವಳಿಯಿಂದ ಹೊರಬಿದ್ದಿದ್ದಾರೆ.

*******

ಡಿಯುವಿನ ಘೋಘ್ಲಾ ಬೀಚ್‌ನಲ್ಲಿ ನಿನ್ನೆ ನಡೆದ ಖೇಲೋ ಇಂಡಿಯಾ ಬೀಚ್ ಗೇಮ್ಸ್ ೨೦೨೬ರ ನಾಲ್ಕನೇ ದಿನದಂದು, ಪೆನ್‌ಕಾಕ್ ಸಿಲಾಟ್ ಮತ್ತು ಬೀಚ್ ವಾಲಿಬಾಲ್‌ನಲ್ಲಿ ಅದ್ಭುತ ಪ್ರದರ್ಶನ ನೀಡುವ ಮೂಲಕ ತಮಿಳುನಾಡು ಎರಡು ಚಿನ್ನ, ಎರಡು ಬೆಳ್ಳಿ ಮತ್ತು ಮೂರು ಕಂಚಿನ ಪದಕಗಳನ್ನು ಗೆದ್ದು ಪದಕ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಪುರುಷರ ಬೀಚ್ ವಾಲಿಬಾಲ್ ನಲ್ಲಿ ಗೋವಾ ತಂಡ ಚಿನ್ನದ ಪದಕ ವಿಜೇತವಾಗಿದೆ. ಆತಿಥೇಯ ದಾದ್ರಾ ಮತ್ತು ನಗರ ಹವೇಲಿ ಮತ್ತು ದಮನ್ ಮತ್ತು ಡಿಯು ಒಟ್ಟು ಆರು ಪದಕಗಳೊಂದಿಗೆ ಎರಡನೇ ಸ್ಥಾನದಲ್ಲಿವೆ. ನಂತರ ಮಣಿಪುರ ಮತ್ತು ಚಂಡೀಗಢ ತಲಾ ಐದು ಪದಕಗಳನ್ನು ಪಡೆದಿವೆ. ಸೆಪಕ್ಟಕ್ರಾ ಸ್ಪರ್ಧೆಯಲ್ಲಿ ಹರಿಯಾಣ ಮಹಿಳಾ ತಂಡ ಮತ್ತು ದೆಹಲಿ ಪುರುಷ ತಂಡ ಚಿನ್ನದ ಪದಕ ಗೆದ್ದಿದ್ದಾರೆ. ಮಹಿಳಾ ಬೀಚ್ ಸಾಕರ್‌ನಲ್ಲಿ, ಹಾಲಿ ಚಾಂಪಿಯನ್ ಒಡಿಶಾ ಮತ್ತು ಗುಜರಾತ್ ಫೈನಲ್‌ಗೆ ಮುನ್ನಡೆದಿವೆ.

*******

ಕರ್ನಾಟಕದ ಬೆಳಗಾವಿ ಜಿಲ್ಲೆ, ಬೈಲಹೊಂಗಲ ತಾಲೂಕು, ಮರಕುಂಬಿಯ ಇನಾಮದಾರ ಸಕ್ಕರೆ ಕಾರ್ಖಾನೆಯಲ್ಲಿ ಬಾಯ್ಲರ್ ಸ್ಫೋಟಗೊಂಡ ಘಟನೆಯಲ್ಲಿ ಮೃತ ಕಾರ್ಮಿಕರ ಸಂಖ್ಯೆ ಎಂಟಕ್ಕೆ ಏರಿಕೆಯಾಗಿದೆ. ಮುರಗೋಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಬೆಳಗಾವಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮರಾಜನ್ ತಿಳಿಸಿದ್ದಾರೆ.

***END***